# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಸಿ.ಎನ್. ಮಂಜೇಗೌಡ ರವರು ಶೂನ್ಯ ವೇಳೆಯಲ್ಲಿ ಮಂಡಿಸಿರುವ ಪ್ರಸ್ತಾಪಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

***

**ವಿಷಯ:** ಈಗಾಗಲೇ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಚುನಾವಣೆಗಾಗಿ ಸರ್ಕಾರ ಮೀಸಲಾತಿ ಪಟ್ಟಿ ನೀಡದ ಕಾರಣಕ್ಕೆ ಆಯೋಗ ನ್ಯಾಯಾಂಗ ನಿಂದನೆ ಮೊಕದ್ದಮೆ ಹೂಡಿದ್ದು, ಮೇ 31 ಕ್ಕೆ ಗಡುವು ವಿಧಿಸಿದ್ದರೂ ಮೀಸಲಾತಿ ಪಟ್ಟಿ ನೀಡಿರುವುದಿಲ್ಲ. ಅವಧಿ ಮುಗಿದ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಲು ಆಯೋಗ ಸಿದ್ಧವಿದ್ದರೂ ಸರ್ಕಾರ ಮೀಸಲಾತಿ ಪಟ್ಟಿ ಕೊಡದ ಕಾರಣ ಆಯೋಗ ಕೈ ಕೊಟ್ಟಿ ಕುಳಿತುಕೊಳ್ಳುವಂತಾಗಿದ್ದು, ಈ ಸಂಬಂಧ ಮೇಲ್ಮನವಿಗೆ ಮುಂದಾಗಿರುವುದು ತಿಳಿದು ಬಂದಿರುತ್ತದೆ.

ಆದ ಕಾರಣ, ರಾಜ್ಯ ಸರ್ಕಾರ ಗ್ರಾಮ ಪಂಚಾಯತಿಗಳು ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವ ಸಂಬಂಧ ಕೂಡಲೇ ಮೀಸಲಾತಿ ಪಟ್ಟಿಯನ್ನು ಚುನಾವಣಾ ಆಯೋಗಕ್ಕೆ ಒದಗಿಸಿ ಚುನಾವಣಾ ನಡೆಸುವುದಕ್ಕೆ ಅನುವು ಮಾಡಿಕೊಡುವ ಬಗ್ಗೆ.

******

**ಉತ್ತರ:** ಅಧಿಕಾರ ವಿಕೇಂದ್ರಿಕರಣ ತತ್ವದಡಿ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅಧಿಕಾರ ವಿಕೇಂದ್ರಿಕರಣಗೊಳಿಸುವ ಉದ್ದೇಶದಿಂದ ಸಂವಿಧಾನದ 73 ನೇ ತಿದ್ದುಪಡಿ ಅನುಸಾರ ರಾಜ್ಯದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಅನ್ನು ದಿನಾಂಕ: 10-05-1993 ರಿಂದ ಜಾರಿಗೊಳಿಸಲಾಗಿರುತ್ತದೆ. ಈ ಅಧಿನಿಯಮದನ್ವಯ ರಚಿಸಲಾಗಿರುವ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಸ್ಥಳೀಯ ಸ್ವಯಂ ಆಡಳಿತ ಸಂಸ್ಥೆಗಳಾಗಿ ಕಾರ್ಯನಿರ್ವಹಿಸಬೇಕೆಂಬುದು ಅಧಿನಿಯಮದ ಆಶಯವಾಗಿರುತ್ತದೆ.

**1) ಗ್ರಾಮ ಪಂಚಾಯತಿ ಚುನಾವಣೆ ಬಗ್ಗೆ.**

1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 41 ರ ಪ್ರಕಾರ ಗ್ರಾಮ ಪಂಚಾಯತಿಯ ಸದಸ್ಯರ ಅವಧಿಯು ಐದು ವರ್ಷಗಳಾಗಿರುತ್ತದೆ. ಪ್ರಕರಣ 42 ರ ಪ್ರಕಾರ ಗ್ರಾಮ ಪಂಚಾಯತಿ ಸದಸ್ಯರ ಅವಧಿಯು ಪ್ರಥಮ ಸಭೆ ಗೊತ್ತುಪಡಿಸಿದ ದಿನಾಂಕದಿಂದ ಪ್ರಾರಂಭವಾಗುತ್ತದೆ.

2) ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಡಿಸೆಂಬರ್ 2020 ರಲ್ಲಿ ಸದಸ್ಯ ಸ್ಥಾನಗಳಿಗೆ ಚುನಾವಣೆ ನಡೆಸಲಾಗಿರುತ್ತದೆ. ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಜನವರಿ-ಫೆಬ್ರುವರಿ 2021 ರಲ್ಲಿ ಚುನಾವಣೆ ನಡೆಸಿ ಆಯ್ಕೆ ಮಾಡಲಾಗಿದ್ದು, ಈ ಅವಧಿಯು ಜನವರಿ- ಫೆಬ್ರುವರಿ 2026 ರವರೆಗೆ ಇರುತ್ತದೆ. ಅವಧಿ ಮುಗಿದ ನಂತರ ಚುನಾವಣೆ ನಡೆಸಲು ಕ್ರಮ ವಹಿಸಲಾಗುವುದು.

## 2) ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿ ಚುನಾವಣೆ ಬಗ್ಗೆ.

ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಅವಧಿಯು ಜೂನ್ 2021ಕ್ಕೆ ಮುಕ್ತಾಯಗೊಂಡಿರುತ್ತದೆ. ಅವಧಿಯು ಮುಗಿದ ನಂತರ ಚುನಾವಣೆಯನ್ನು ನಡೆಸುವ ಸಿದ್ಧತೆಯಲ್ಲಿದ್ದಾಗ ರಾಜ್ಯದಲ್ಲಿ ಕೋವಿಡ್ ಸಾಂಕ್ರಾಮಿಕ ರೋಗ ಹಿನ್ನೆಲೆಯಲ್ಲಿ ಚುನಾವಣೆ ನಡೆಸಲು ಸಾಧ್ಯವಾಗಲಿಲ್ಲ. ತದನಂತರ, ರಾಜ್ಯ ಸರ್ಕಾರ ಹೊಸದಾಗಿ ಜಿಲ್ಲಾ ಹಾಗೂ ತಾಲ್ಲೂಕುಗಳನ್ನು ರಚಿಸಲಾಗಿದ್ದು, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿ ಕ್ಷೇತ್ರಗಳ ಭೂ ವ್ಯಾಪ್ತಿಯಲ್ಲಿ ಬದಲಾವಣೆಯಾದ ಕಾರಣ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿಗಳ ಚುನಾವಣಾ ಕ್ಷೇತ್ರಗಳನ್ನು ಪುನರ್ ರಚಿಸಬೇಕಾದ ಅನಿವಾರ್ಯತೆ ಉಂಟಾಗಿದೆ.

ತದನಂತರ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತರಲಾಗಿದೆ.

1. ಸರ್ಕಾರವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ 2021, ದಿನಾಂಕ:18-9-2021ರ ಪ್ರಕರಣ 124, 163 ರಡಿಯಲ್ಲಿ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ ನಿರ್ಣಯ ಹಾಗೂ ಪ್ರಕರಣ 123, 162 ರಡಿಯಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಮೀಸಲಾತಿಯನ್ನು ನಿಗದಿಪಡಿಸುವ ಅಧಿಕಾರವನ್ನು ಹೊಂದಿರುತ್ತದೆ.
2. ಈ ತಿದ್ದುಪಡಿಯ ಪ್ರಕಾರ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ :ಗ್ರಾಅಪಂರಾ 319 ಜಿಪಸ 2021, ದಿನಾಂಕ: 13-10-2021 ರಂದು ರಚಿಸಲಾಗಿದೆ.
3. ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಶಿಫಾರಸ್ಸಿನಂತೆ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ನಿರ್ಣಯಿಸಿ ಸರ್ಕಾರವು ದಿನಾಂಕ:01-03-2023 ರಂದು ಅಧಿಸೂಚನೆ ಹೊರಡಿಸಿತ್ತು.
4. ನಂತರ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿಸಂಖ್ಯೆ: 20426/2021ರ ಪ್ರಕರಣದಲ್ಲಿ ದಿನಾಂಕ:28-06-2023ರಂದು ನೀಡಿದ ಆದೇಶದಂತೆ ರಾಜ್ಯದ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ರೀಡೂ (Redo) ಮಾಡಲು ಸರ್ಕಾರವು ತೀರ್ಮಾನಿಸಿತು.
5. ನಂತರ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ಹೊಸದಾಗಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪಂ 319 ಜಿಪಸ 2021 ದಿನಾಂಕ: 10-07-2023 ರಂದು ರಚಿಸಲಾಗಿದೆ.

6. ಆಯೋಗದ ಶಿಫಾರಸ್ಸಿನಂತೆ ಸರ್ಕಾರವು, ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ಶಿವಮೊಗ್ಗ ಜಿಲ್ಲೆ ಹೊರತುಪಡಿಸಿ ಅಧಿಸೂಚನೆ ಹೊರಡಿಸಿದೆ.
7. ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 26 ಶಾಸನ 2023, ದಿನಾಂಕ:30-01-2024 ರಂದು ಶಿವಮೊಗ್ಗ ಜಿಲ್ಲೆಯ ಮಲೆನಾಡು ಭಾಗದ ತಾಲ್ಲೂಕುಗಳ ಜಿಲ್ಲಾ ಪಂಚಾಯತಿ ಸದಸ್ಯರ ಸಂಖ್ಯೆ ನಿಗಧಿಪಡಿಸುವ ಸಂಬಂಧ ಅಧಿನಿಯಮಕ್ಕೆ ತಿದ್ದುಪಡಿ ತರಲಾಗಿದೆ.
8. ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 03 ಶಾಸನ 2024, ದಿನಾಂಕ:11-03-2024 ರಂದು ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತಿ ಸದಸ್ಯರ ಸಂಖ್ಯೆ ನಿಗಧಿಪಡಿಸುವ ಸಂಬಂಧ ಅಧಿನಿಯಮಕ್ಕೆ ತಿದ್ದುಪಡಿ ತರಲಾಗಿದೆ.
9. ನಂತರ ಶಿವಮೊಗ್ಗ ಮತ್ತು ಕೊಡಗು ಜಿಲ್ಲೆಯ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಯ ಸೀಮಾ ಗಡಿಯನ್ನು ಗುರುತಿಸಿ ಅಧಿಸೂಚಿಸಲಾಗಿದೆ.

ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳಿಗೆ ಮೀಸಲಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ ಚುನಾವಣೆ ನಡೆಸಲಾಗುವುದು.

ಮುಂದುವರೆದು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021, ದಿನಾಂಕ:26.04.2021ರಲ್ಲಿ ಆಡಳಿತ ಅಧಿಕಾರಿಯನ್ನು ನೇಮಿಸಲಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 239ರಲ್ಲಿನ ಉಪಬಂಧದನ್ವಯ ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳ ಆಡಳಿತಾಧಿಕಾರಿಗಳು ಎಲ್ಲಾ ಪ್ರಕಾರ್ಯಗಳು ಮತ್ತು ಜವಾಬ್ದಾರಿಗಳನ್ನು ನಿರ್ವಹಿಸಲು ಅಧಿಕಾರ ಹೊಂದಿರುತ್ತಾರೆ. ಆಡಳಿತಾಧಿಕಾರಿಗಳು ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳಲ್ಲಿ ಕ್ರಿಯಾ ಯೋಜನೆಯನ್ನು ತಯಾರಿಸಿಕೊಂಡು ಯೋಜನೆ/ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಶೀಘ್ರವಾಗಿ ಮೀಸಲಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಚುನಾವಣಾ ಆಯೋಗಕ್ಕೆ ಕಳುಹಿಸಲಾಗುವುದು.

ಸಂಖ್ಯೆ:RDPR 657 GPA 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು